ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	871 (882)
ಮಾನ್ಯ ಸದಸ್ಯರ ಹೆಸರು	:	ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	21-12-2021
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	2019-20 ಮತ್ತು 2021-22ರ ಸಾಲಿನಲ್ಲಿ ರಾಜ್ಯಾದ್ಯಂತ ಬರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ವಚ್ಛ ಭಾರತ್ ಯೋಜನೆಯಡಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು;	ಸ್ವಚ್ಛ ಭಾರತ್ ಯೋಜನೆಯ ಲೆಕ್ಕ ಶೀರ್ಷಿಕೆ 2217-80-800-0-35 ಅಡಿಯಲ್ಲಿ 2019-20 ಮತ್ತು 2021-22 ರ ಸಾಲಿನಲ್ಲಿ ಬಿಡುಗಡೆಯಾದ ಅನುದಾನದ ವಿವರ ಕೆಳಕಂಡಂತಿದೆ; (ರೂ. ಲಕ್ಷಗಳಲ್ಲಿ) **ಸಾಲು** | **2019-20** | **2021-22** ಬಿಡುಗಡೆಯಾದ ಮೊತ್ತ | 857.25 | 4619.32
(ಆ)	ಸದರಿ ಯೋಜನೆಯಲ್ಲಿ ಬಿಡುಗಡೆಯಾದಂತಹ ಅನುದಾನದಲ್ಲಿ ವೆಚ್ಚ ಮಾಡಲಾದ ಅನುದಾನ ಹಾಗೂ ಉಳಿದ ಅನುದಾನವೆಷ್ಟು; (ಸಂಪೂರ್ಣ ವಿವರ ಒದಗಿಸುವುದು)	ಸ್ವಚ್ಛ ಭಾರತ ಯೋಜನೆಯಡಿ ಬಿಡುಗಡೆಯಾದ ಮತ್ತು ವೆಚ್ಚ ಮಾಡಲಾದ ಅನುದಾನದ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.
(ಇ)	ಬಿಡುಗಡೆಯಾಗಿರುವಂತಹ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)	ಸ್ವಚ್ಛ ಭಾರತ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಕೈಗೊಳ್ಳಲಾದ ಘನತ್ಯಾಜ್ಯ ವಸ್ತು ನಿರ್ವಹಣೆ ಘಟಕದ ಕಾಮಗಾರಿಗಳ ಜಿಲ್ಲಾವಾರು ವಿವರಗಳನ್ನು **ಅನುಬಂಧ-2** ರಲ್ಲಿ ಲಗತ್ತಿಸಿದೆ.
(ಈ)	ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?(ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)	ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ; • ಘನತ್ಯಾಜ್ಯ ವಸ್ತುಗಳ ನಿರ್ವಹಣೆಗೆ ಅಗತ್ಯವಿರುವ ವಾಹನಗಳು/ ಯಂತ್ರೋಪಕರಣಗಳನ್ನು ನೇರವಾಗಿ GeM ಪೋರ್ಟಲ್ ಮೂಲಕ ಖರೀದಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. • ಘನತ್ಯಾಜ್ಯ ವಸ್ತು ನಿರ್ವಹಣೆಗೆ ಸಂಬಂಧಿಸಿದಂತೆ ರೂ. 5.00 ಕೋಟಿಗಳವರೆಗಿನ ಅಂದಾಜುಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ತಾಂತ್ರಿಕ ಮಂಜೂರಾತಿ ನೀಡುವ ಅಧಿಕಾರವನ್ನು ಜಿಲ್ಲಾಡಳಿತಕ್ಕೆ ಪ್ರತ್ಯಾಯೋಜಿಸಲಾಗಿರುತ್ತದೆ. • ಮಾದರಿ ಘನ ತ್ಯಾಜ್ಯ ವಸ್ತು ನಿರ್ವಹಣೆ ಬೈಲಾ ಮತ್ತು ಘನ ತ್ಯಾಜ್ಯ ವಸ್ತು ನಿರ್ವಹಣೆ ರಾಜ್ಯ ನೀತಿ ಮತ್ತು ಕಾರ್ಯತಂತ್ರದ ಮೂಲಕ SWM service

		charges & penalty ಗಳನ್ನು ಜಾರಿಗೆ ತರುವ ಮೂಲಕ ಸುಸ್ಥಿರತೆ ತರಲು ಕ್ರಮ ವಹಿಸಿದೆ. • ಕಾಲಕಾಲಕ್ಕೆ ಪ್ರಗತಿ ಪರಿಶೀಲನಾ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ನಅಇ 218 ಸಿಎಸ್‌ಎಸ್ 2021

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ ಉದ್ಯಮಗಳ
ಸಚಿವರು.